ದಿನಾಂಕ 24-01-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ.**

1) ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಭೂ ಸ್ವಾಧೀನ ಅಧಿಕಾರಿಗಳಿಗೆ ನಾನು ಒಬ್ಬನೇ ಅರ್ಜಿ ಸಲ್ಲಿಸಿರುತ್ತೇನೆ. ನಾನು ಹುಣಸೂರು ನ್ಯಾಯಾಲಯದಲ್ಲಿ ದಾಖಲೆಗಳನ್ನು ಹಾಜರುಪಡಿಸುವಂತೆ ಅರ್ಜಿ ಸಲ್ಲಿಸಿದ್ದೆ ಎಂದರೆ ಸರಿ. ಇತರೆ ಅರ್ಜಿದಾರರು ನನ್ನ ಜೊತೆ ಅರ್ಜಿ ಸಲ್ಲಿಸಿರುವುದಿಲ್ಲ. ನಾನು ಹುಣಸೂರು ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದೆ ಎಂದರೆ ಸರಿ. ಪ್ರಕರಣ ಸದರಿ ನ್ಯಾಯಾಲಯದಿಂದ ಈ ನ್ಯಾಯಾಲಯಕ್ಕೆ ವರ್ಗಾವಣೆ ಆಗಿರುತ್ತದೆ ಎಂದರೆ ಸರಿ. ವರ್ಗಾವಣೆ ಗೊಂಡ ನಂತರ ನಾನು ಈ ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದೆ ಎಂದರೆ ಸರಿ. ನಂತರ ನಾನು ನ್ಯಾಯಾಲಯಕ್ಕೆ ಹಾಜರಾಗಿರುವುದಿಲ್ಲ ಎಂದರೆ ಸರಿ.

2) ದಿಃ 18-03-2010 ರಂದು ನಾನು ಸಲ್ಲಿಸಿರುವ ಪ್ರಕರಣ ವಜಾ ಗೊಂಡಿರುತ್ತದೆ ಎಂದರೆ ಸರಿ. ಸದರಿ ಪ್ರಕರಣ ವಜಾ ಗೊಂಡಿರುವ ಬಗ್ಗೆ ನನಗೆ ಮಾಹಿತಿ ಇತ್ತು. ನಂತರ ಹತ್ತು ವರ್ಷಗಳ ನಂತರ ಈ ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿ. ಹತ್ತು ವರ್ಷಗಳ ಕಾಲ ವಿಳಂಬವಾಗಿ ಅರ್ಜಿ ಸಲ್ಲಿಸಿದ ಬಗ್ಗೆ ದಾಖಲೆ ಹಾಜರುಪಡಿಸಿರುತ್ತೇನೆ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.